## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನಾ ವಿಭಾಗ ಹಾಗೂ ಯೋಜನಾ ಉಪ ವಿಭಾಗ ಕಚೇರಿಗಳು ಮತ್ತು ಅಧಿಕಾರಿ / ಸಿಬ್ಬಂದಿ ಹುದ್ದೆಗಳನ್ನು ಮುಂದುವರೆಸುವ ಬಗ್ಗೆ – ಆದೇಶ.

**ಓದಲಾಗಿದೆ:-**

1. ಸರ್ಕಾರಿ ಆದೇಶ ಸಂಖ್ಯೆ. ಗ್ರಾಅಪ 77 ಜಿಪಅ 2008, ದಿನಾಂಕ. 04-09-2008
2. ಸರ್ಕಾರಿ ಆದೇಶ ಸಂಖ್ಯೆ. ಗ್ರಾಅಪ 181 ಜಿಪಅ 2010, ದಿನಾಂಕ. 24-09-2010
3. ಸರ್ಕಾರಿ ಆದೇಶ ಸಂಖ್ಯೆ. ಗ್ರಾಅಪ 255 ಜಿಪಅ 2011, ದಿನಾಂಕ. 21-09-2011
4. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರ ಪತ್ರ ಸಂಖ್ಯೆ. ಕೆಆರ್‌ಆರ್‌ಡಿಎ /ಸಿ-1/2012/958,ದಿನಾಂಕ. 06-08-2012

*****

**ಪ್ರಸ್ತಾವನೆ:**

ಕರ್ನಾಟಕ ರಾಜ್ಯ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಸಂಸ್ಥೆಯ ವತಿಯಿಂದ ಕರ್ನಾಟಕ ರಾಜ್ಯದಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿಯಲ್ಲಿ, ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಂಡು ನಿಗದಿತ ಕಾಲಾವಧಿಯೊಳಗೆ ವ್ಯವಸ್ಥಿತವಾಗಿ ಹಾಗೂ ಪರಿಣಾಮಕಾರಿಯಾಗಿ ಪೂರ್ಣಗೊಳಿಸುವ ಉದ್ದೇಶದಿಂದ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ. 04-09--2008ರ ಸರ್ಕಾರಿ ಆದೇಶದಲ್ಲಿ 19 ಯೋಜನಾ ವಿಭಾಗಗಳು ಹಾಗೂ 32 ಯೋಜನಾ ಉಪ ವಿಭಾಗಗಳನ್ನು ದಿನಾಂಕ. 1-9-2008ರಿಂದ ಜಾರಿಗೆ ಬರುವಂತೆ ಒಂದು ವರ್ಷದ ಅವಧಿಗೆ ಸೃಜಿಸಿ, ಕಾಲಕಾಲಕ್ಕೆ ಮೇಲೆ ಕ್ರಮ ಸಂಖ್ಯೆ (2) ಮತ್ತು (3)ರಲ್ಲಿ ಓದಲಾದ ದಿನಾಂಕಗಳ ಆದೇಶಗಳಲ್ಲಿ ವಿಸ್ತರಿಸಲಾಗಿದೆ. ದಿನಾಂಕ. 21-09-2011ರ ಆದೇಶದಲ್ಲಿ ವಿಸ್ತರಿಸಿದ ಅವಧಿಯು ದಿನಾಂಕ. 31-08-2012ಕ್ಕೆ ಅಂತ್ಯಗೊಂಡಿರುತ್ತದೆ.

ಪಿ.ಎಂ.ಜಿ.ಎಸ್.ವೈ. ಯೋಜನೆಯು ಸಂಪೂರ್ಣವಾಗಿ ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆಯಾಗಿದ್ದು, ಈ ಯೋಜನೆಯಡಿ ಹಂತ 1 ರಿಂದ 10 ರವರೆಗೆ ಒಟ್ಟು 3251 ರಸ್ತೆಗಳ 16270.63 ಕಿ.ಮೀ. ಉದ್ದವನ್ನು ಅಭಿವೃದ್ಧಿ ಪಡಿಸಲು ರೂ. 3292.07 ಕೋಟಿಗಳಿಗೆ ಅನುಮೋದನೆ ಪಡೆದಿದ್ದು, ಮಾರ್ಚ್ 2012ರ ಅಂತ್ಯಕ್ಕೆ 3151 ಕಾಮಗಾರಿಗಳ ಒಟ್ಟು ಉದ್ದ 15540.77 ಕಿ.ಮೀ. ರಸ್ತೆಗಳನ್ನು ಅಭಿವೃದ್ಧಿಪಡಿಸಿ ರೂ. 3474.00 ಕೋಟಿಗಳ ವೆಚ್ಚ ಮಾಡಲಾಗಿದೆ. ಉಳಿದ 729.86 ಕಿ.ಮೀ. ಉದ್ದದ ರಸ್ತೆಯನ್ನು 2012-13ನೇ ಸಾಲಿನಲ್ಲಿ ಪೂರ್ಣಗೊಳಿಸಲು ಯೋಜಿಸಲಾಗಿದೆ. ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯಡಿ (CMRRF) 2216.29 ಕಿ.ಮೀ. ರಸ್ತೆಗಳನ್ನು 2012-13ನೇ ಸಾಲಿನಲ್ಲಿ ಪೂರ್ಣಗೊಳಿಸಲು ಯೋಜಿಸಲಾಗಿದೆ. ಅಲ್ಲದೆ ಅನುಮೋದನೆಯಾಗಿರುವ Jute and Coir tech works, Missing CDs ಮತ್ತು ಹಂತ-XI ರಡಿಯಲ್ಲಿ ಸುಮಾರು 2400 ಕಿ.ಮೀ. ಹಾಗೂ CMRRF ಅಡಿಯಲ್ಲಿ ಹಂತ-II ರ 5670 ಕಿ.ಮೀ. ಡಿಪಿಆರ್ ತಯಾರಿಕೆ ಮತ್ತು ಕೇಂದ್ರ ಸರ್ಕಾರದ ಆರ್ & ಡಿ ನಲ್ಲಿ 176 ಕಾಮಗಾರಿಗಳ ಡಿಪಿಆರ್ ತಯಾರಿಕೆ ಇದ್ದು, ಇವುಗಳೆಲ್ಲವನ್ನು ನಿರ್ವಹಿಸಲು ದಿನಾಂಕ. 4-9-2008ರ ಆದೇಶದಲ್ಲಿ ಸೃಜಿಸಲಾಗಿರುವ 19 ಯೋಜನಾ ವಿಭಾಗಗಳು

----2

ಹಾಗೂ 32 ಯೋಜನಾ ಉಪ ವಿಭಾಗಗಳನ್ನು ಮತ್ತು ಇವುಗಳಿಗೆ ಹೊಂದಿಕೊಂಡಿರುವ ಹುದ್ದೆಗಳನ್ನು ದಿನಾಂಕ 1-9-2012 ರಿಂದ 31-08-2015 ರವರೆಗೆ ಮುಂದುವರಿಸಲು ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ದಿನಾಂಕ. 6-8-2012ರ ಪತ್ರದಲ್ಲಿ ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ರವರು ಕೋರಿರುತ್ತಾರೆ.

ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಪಿ.ಎಂ.ಜಿ.ಎಸ್.ವೈ. ಯೋಜನಾ ಕಾರ್ಯಕ್ರಮಗಳನ್ನು 2ನೇ ಹಂತದ ಕಾಮಗಾರಿಗಳ ನಿರ್ವಹಣೆಗಾಗಿ ಈ ಕಚೇರಿಗಳನ್ನು ದಿನಾಂಕ. 01-09-2012 ರಿಂದ ಒಂದು ವರ್ಷದ ಅವಧಿಗೆ ಮುಂದುವರೆಸಲು ಸರ್ಕಾರವು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

**<u>ಆದೇಶ ಸಂಖ್ಯೆ. ಗ್ರಾಅಪ 367 ಜಿಪಅ 2012, ಬೆಂಗಳೂರು, ದಿನಾಂಕ. 10-10-2012</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ದಿನಾಂಕ. 04-09-2008ರ ಸರ್ಕಾರಿ ಆದೇಶದ ಮೂಲಕ ಸೃಜಿಸಲಾಗಿರುವ 19 ಯೋಜನಾ ವಿಭಾಗಗಳು ಮತ್ತು 32 ಯೋಜನಾ ಉಪ ವಿಭಾಗಗಳ ಕಚೇರಿಗಳನ್ನು ಸದರಿ ಕಚೇರಿಗಳಿಗೆ ಮಂಜೂರಾಗಿರುವ ಹುದ್ದೆಗಳನ್ನು ದಿನಾಂಕ. 01-09-2012 ರಿಂದ ಒಂದು ವರ್ಷದ ಅವಧಿಗೆ ಮುಂದುವರೆಸಿದೆ.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ. ಎಫ್‌ಡಿ 1 ಟಿಎಫ್‌ಪಿ 96, ದಿನಾಂಕ. 10-07-1996ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

10/10/2012
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ
3. ಎಲ್ಲಾ ಪ್ರಧಾನ ಇಂಜಿನಿಯರ್‌ಗಳು / ಮುಖ್ಯ ಇಂಜಿನಿಯರ್‌ಗಳು / ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
5. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.

7. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
8. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
9. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಗ್ರಾ.ಅ.ಪಂ.ಇಲಾಖೆ.
10. ಮಾನ್ಯ ಉಪ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರಿಗೆ
11. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ, ಬಿ & ಸಿ)
12. ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಎಲ್ಲಾ ವೃತ್ತಗಳ ಅಧೀಕ್ಷಕ ಇಂಜಿನಿಯರ್‌ಗಳಿಗೆ / ಎಲ್ಲಾ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್‌ಗಳಿಗೆ.
13. ಎಲ್ಲಾ ಯೋಜನಾ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್‌ಗಳಿಗೆ
14. ಎಲ್ಲಾ ಯೋಜನಾ ಉಪ ವಿಭಾಗಗಳ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳಿಗೆ.
15. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿ (ಆಡಳಿತ-1 & 2) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
16. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.